**ಓ.ಎಸ್. ನಂಃ 128/2023**

**ಡಿ.ಡಬ್ಲ್ಯೂಃ 1**

**ದಿನಾಂಕ 16.09.2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಪ್ರತಿವಾದಿಯ ಪರ: ಶ್ರೀ.ಕೆ.ಎಲ್. ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ನನ್ನ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ಪಹಣಿಗಳನ್ನು ನಿಡಿ.1 ರಿಂದ 30 ಎಂದು, ರೆಕಾರ್ಟ್ಸ್ ಆಫ್ ರೈಟ್ಸ್ ನಿಡಿ.31 ಎಂದು, ಇಂಡೆಕ್ಸ್ ಆಫ್ ಲ್ಯಾಂಡ್ ನಿಡಿ.32 ಎಂದು, ದಿನಾಂಕ 09.09.2015 ರ ನೊಂದಾಯಿತ ವಿಭಾಗ ಪತ್ರದ ದೃಢಿಕೃತ ನಕಲನ್ನು ನಿಡಿ.33 ಎಂದು, ದಿನಾಂಕ 03.10.2022 ರ ನೊಂದಾಯಿತ ಹಕ್ಕು ಬಿಡುಗಡೆ ಪತ್ರದ ಅಸಲು ಪ್ರತಿಯನ್ನು ನಿಡಿ.34 ಎಂದು, ನಕಾಶೆಗಳ ದೃಢಿಕೃತ ನಕಲುಗಳನ್ನು ನಿಡಿ.35 ಮತ್ತು 36 ಎಂದು, ಋಣಭಾರ ಪ್ರಮಾಣ ಪತ್ರವನ್ನು ನಿಡಿ.37 ರಿಂದ 39 ಎಂದು ಗುರುತಿಸಲಾಯಿತು.

**ವಾದಿ ಪರ ವಕೀಲರು ಗೈರು ಹಾಜರಿದ್ದು ಪಾಟೀ ಸವಾಲಿಗಾಗಿ ಮುಂದೂಡಲಾಯಿತು.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ ಇದೆ.**

**1 ನೇ ಹೆಚ್ಚುವರಿ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು**
**ಕೆ.ಆರ್.ನಗರ**